# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 230 |
| ಮಾನ್ಯ ಸದಸ್ಯರ ಹೆಸರು | ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 28.01.2026 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಗ್ರಾಮಗಳ ಗ್ರಾಮ ಠಾಣಾ ಗಡಿಯನ್ನು ಗುರುತಿಸಿದ್ದು ಅಥವಾ ನಿಗಧಿ ಪಡಿಸಿದ್ದು ಯಾವಾಗ; | ರಾಜ್ಯದಲ್ಲಿ ಮೂಲ ಸರ್ವೆ ಮತ್ತು ರೀಸರ್ವೆ ಕಾಲಕ್ಕೆ (ಕ್ರಿ.ಶ. 1840-1935) ಎಲ್ಲಾ ಗ್ರಾಮಗಳ ಕೃಷಿ ಜಮೀನುಗಳಲ್ಲಿ ಅಳತೆ ಮಾಡಿ ಗಡಿ ಗುರ್ತಿಸಿ ನಂತರ ಉಳಿದ ಜನವಸತಿ ಪ್ರದೇಶಗಳನ್ನು (ಗ್ರಾಮ ಠಾಣಾ) ಜಮೀನು ಸ್ಥಿತಿಯಂತೆ ಗುರ್ತಿಸಿ ದಾಖಲೆಗಳನ್ನು ತಯಾರಿಸಲಾಗಿದ್ದು ಅದರಂತೆ, ಗ್ರಾಮ ನಕಾಶೆಯಲ್ಲಿ "ಊರು" ಎಂದು ದಾಖಲಿಸಲಾಗಿದೆ. |
| ಆ) | ಗ್ರಾಮ ಠಾಣಾಗಳ ಗಡಿ ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ದಿನಾಂಕ: 28-10-2016 ರಂದು ಗ್ರಾಮ ಠಾಣ ವಿಸ್ತರಣೆ ಕುರಿತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಕಂದಾಯ ಇಲಾಖೆ ಜಂಟಿ ಸುತ್ತೋಲೆ ಹೊರಡಿಸಿರುತ್ತದೆ.<br><br>ಆದರೆ ಈಗಾಗಲೇ ಅಳತೆಗೆ ಒಳಪಟ್ಟು ಸರ್ವೆ ನಂಬರು ನೀಡಲಾದ ಪ್ರದೇಶವನ್ನು "ಗ್ರಾಮಠಾಣ" ಎಂದು ಪರಿವರ್ತಿಸಿ ವಿಸ್ತರಿಸಲು ಕರ್ನಾಟಕ ಭೂಕಂದಾಯ ನಿಯಮಾವಳಿಗಳನ್ವಯ ಅವಕಾಶವಿರುವುದಿಲ್ಲ. |
| ಇ) | ಸರ್ಕಾರ ಗುರುತಿಸಲಾಗಿರುವ ಗ್ರಾಮ ಠಾಣಾ ವ್ಯಾಪ್ತಿಯಲ್ಲಿ ಜಾಗವಿಲ್ಲದ ಕಾರಣ ಸಾರ್ವಜನಿಕರು ಕಂದಾಯ ಭೂಮಿಯಲ್ಲಿ ಮನೆ ನಿರ್ಮಾಣ ಮಾಡಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈಗಾಗಲೇ ಸಾರ್ವಜನಿಕರು ನಿರ್ಮಿಸಿಕೊಂಡಿರುವ ಮನೆಗಳಿಗೆ ಸರ್ಕಾರದಿಂದ ಇ-ಸ್ವತ್ತು ನೀಡಲಾಗಿದೆಯೇ; (ವಿವರ ನೀಡುವುದು). | ಕಂದಾಯ ಭೂಮಿಯಲ್ಲಿ ಮನೆ ನಿರ್ಮಾಣ ಮಾಡಿಕೊಂಡಿರುವ ಸಾರ್ವಜನಿಕರಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2025ರ ಅನ್ವಯ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ರಲ್ಲಿ ದಾಖಲೆಗಳನ್ವಯ ಇ-ಸ್ವತ್ತು ತಂತ್ರಾಂಶದ ಮೂಲಕ ಒಂದು ಬಾರಿಗೆ ದಿನಾಂಕ: 07.04.2025 ರವರೆಗಿನ ಆಸ್ತಿಗಳಿಗೆ ನಮೂನೆ-11ಬಿ ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ. |
| ಈ) | ಮನೆ/ನಿವೇಶನಗಳಿಗೆ ಇ-ಸ್ವತ್ತು ನೀಡಲು ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ? | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025ರನ್ವಯ ಮನೆ/ನಿವೇಶನಗಳಿಗೆ ಇ-ಸ್ವತ್ತು ನೀಡುವ ಬಗ್ಗೆ ತಿಳಿಸಲಾಗಿರುತ್ತದೆ. |

**ಸಂಖ್ಯೆ: ಕಂಇ 01 ಎಸ್ಎಸ್ಸಿ 2026**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು